೧೯೯೧-೯೨ರ ಪ್ರವಾಸಿ ವರ್ಷದ ಭಾರತ ಸಂದರ್ಶಿಸಿ ಆಚರಣೆಯಲ್ಲಿ ಬಸವಕಲ್ಯಾಣದಲ್ಲಿ ಕಾರ್ಯಕ್ರಮ

೧೪೦೧ (೧೮೪೫) ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ):- ಮಾನ್ಯ ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ೧೯೯೧-೯೨ರ ಪ್ರವಾಸಿ ವರ್ಷದ ಭಾರತ ಸಂದರ್ಶಿಸಿ ಆಚರಣೆಯಲ್ಲಿ ಬಸವಕಲ್ಯಾಣ ತಾಲ್ಲೂಕಿನಲ್ಲಿ ಕೈಗೊಂಡ ಕಾರ್ಯಕ್ರಮಗಳೇನು?

ಆ) ಸರ್ಕಾರ ಬಸವಕಲ್ಯಾಣ ತಾಲ್ಲೂಕಿಗೆ ಪ್ರಸ್ತುತ ವರ್ಷ ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡ ಕಾರ್ಯಕ್ರಮಗಳೇನು?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು):-

ಅ) ಯಾವ ಕಾರ್ಯಕ್ರಮಗಳನ್ನು ಕೈಗೊಂಡಿರುವುದಿಲ್ಲ.

ಆ) ಪ್ರಸ್ತುತ ವರ್ಷದಲ್ಲಿ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿರುವುದಿಲ್ಲ.

ಧಾರವಾಡ ಜಿಲ್ಲಾಪರಿಷತ್ತಿನಿಂದ ನೆರವಾಡ-ಸವಣೂರು ರಸ್ತೆಯನ್ನು ಲೋಕೋಪಯೋಗಿ ಇಲಾಖೆಗೆ ವರ್ಗ ಮಾಡುವುದು

೧೪೦೨ (೧೮೪೬) ಶ್ರೀ ಪಿ. ಸಿ. ಸಿದ್ದನಗೌಡರ್ (ಕಲಘಟಗಿ):- ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:

ಅ) ಧಾರವಾಡ ಜಿಲ್ಲೆಯಲ್ಲಿರುವ ನೆರವಾಡ-ಸವಣೂರು ರಸ್ತೆಯನ್ನು ಜಿಲ್ಲಾ ಪರಿಷತ್ತಿನಿಂದ ಲೋಕೋಪಯೋಗಿ ಇಲಾಖೆಯು ಪಡೆದುಕೊಂಡಿದಯೇ?

ಆ) ಹಾಗಿದ್ದಲ್ಲಿ ಯಾವ ಯಾವ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆ ಪಡೆದುಕೊಂಡಿತು?

ಇ) ಲೋಕೋಪಯೋಗಿ ಇಲಾಖೆಯು ಈ ರಸ್ತೆಯನ್ನು ಪಡೆದುಕೊಂಡು ಸುಧಾರಣೆ ಮಾಡದಿರುವುದನ್ನು ಪ್ರತಿಭಟಿಸಿ ಸಾರ್ವಜನಿಕರು ರಾಸ್ತಾ ರೊಕೋ ಮಾಡಿದ್ದನ್ನು ಸರ್ಕಾರ ಗಮನಿಸಿದೆಯೇ?

ಈ) ಹಾಗಿದ್ದಲ್ಲಿ ಮೇಲ್ಕಂಡ ರಸ್ತೆಯ ದುರಸ್ತಿ ಮಾಡಲು ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು?

ಉ) ಮೇಲ್ಕಂಡ ರಸ್ತೆಯನ್ನು ಸುಧಾರಣೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ. ಪೆಚ್. ಅಪ್ಪತ್ತ ರೆಡ್ಡಿ (ಲೋಕೋಪಯೋಗಿ ಸಚಿವರು):-

ಅ) ಇಲ್ಲ.

ಆ) ಯಾವುದೂ ಇಲ್ಲ. ಆದರೆ ಆದೇಶ ಸಂಖ್ಯೆ ಪಿ. ಡಬ್ಲ್ಯು. ಡಿ. ೬೮ ಸಿಆರ್‌ಎಂ ೯೯ ದಿನಾಂಕ ೧೪-೩-೧೯೯೨ರಂತೆ, ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಲ್ಲಿರುವ ೧೦೦೦೦ ಕಿ. ಮೀ. ರಸ್ತೆಗಳನ್ನು ಪ್ರತಿ